# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 942 |
| ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ ರಾಥೋಡ |
| ಉತ್ತರಿಸುವ ದಿನಾಂಕ | 24-07-2024 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಮುಜರಾಯಿ ದೇವಸ್ಥಾನಗಳಿಗೆ ಸಂಬಂಧಿಸಿದ ಆಸ್ತಿಗಳನ್ನು ಅಲ್ಲಿನ ಅರ್ಚಕರು ಹಾಗೂ ಪ್ರಭಾವಿಗಳು ಅಕ್ರಮವಾಗಿ ತಮ್ಮ ಹೆಸರಿಗೆ ನೋಂದಾಯಿಸಿ ಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | i. ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಗೆ ರಾಜ್ಯದ ಒಟ್ಟು 34,563 ದೇವಸ್ಥಾನಗಳು ಒಳಪಟ್ಟಿರುತ್ತವೆ. ಇಲಾಖಾ ದೇವಸ್ಥಾನಗಳನ್ನು ಆಯಾ ದೇವಾಲಯಗಳ ಆದಾಯಕ್ಕನುಗುಣವಾಗಿ ಪ್ರವರ್ಗ 'ಎ' 'ಬಿ' ಮತ್ತು 'ಸಿ' ದೇವಾಲಯಗಳೆಂದು ವರ್ಗೀಕರಿಸಲಾಗಿದೆ.<br>ii. ಇಲಾಖೆಯ ವ್ಯಾಪ್ತಿಯಲ್ಲಿ ಪ್ರವರ್ಗ 'ಎ' 205 ದೇವಾಲಯಗಳು ಪ್ರವರ್ಗ 'ಬಿ' 193 ದೇವಾಲಯಗಳು ಮತ್ತು ಪ್ರವರ್ಗ 'ಸಿ' 34,165 ದೇವಾಲಯಗಳು ಇದ್ದು, ಈ ದೇವಾಲಯಗಳ ಸಾವಿರಾರು ಎಕರೆ ಭೂಮಿಯು ಇನಾಂ ರದ್ದಿಯಾತಿ ಕಾಯ್ದೆ ಮತ್ತು ಭೂಸುಧಾರಣಾ ಕಾಯ್ದೆಯಡಿಯಲ್ಲಿ ಪರಭಾರೆಯಾಗಿರುತ್ತವೆ. ಸದರಿ 'ಬಿ' ಮತ್ತು 'ಸಿ' ವರ್ಗದ ದೇವಾಲಯಗಳ ಸ್ವತ್ತುಗಳಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು ಹಾಗೂ ತಾಲ್ಲೂಕು ತಹಶೀಲ್ದಾರ್ ರವರೇ ಸಕ್ಷಮ ಪ್ರಾಧಿಕಾರಿಗಳಾಗಿರುತ್ತಾರೆ. ಅಲ್ಲದೆ ಭೂ ನ್ಯಾಯ ಮಂಡಳಿಯ ಅಧ್ಯಕ್ಷರು ಸಂಬಂಧಪಟ್ಟ ಉಪವಿಭಾಗದ ಉಪ ವಿಭಾಗಾಧಿಕಾರಿ/ ಸಹಾಯಕ ಆಯುಕ್ತರು ಆಗಿದ್ದು, ಕಂದಾಯ ಇಲಾಖೆ ತಾಲ್ಲೂಕು ತಹಶೀಲ್ದಾರ್ ರವರು ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.<br>iii. ಕರ್ನಾಟಕ ರಾಜ್ಯಪತ್ರ ಅಧಿಸೂಚನೆ ಸಂಖ್ಯೆ:ಸಂವ್ಯಶಾ 52 ಶಾಸನ 2021, ಬೆಂಗಳೂರು, ದಿನಾಂಕ:18.01.2022 ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ಅಧಿನಿಯಮ, 2021ರ ಪ್ರಾರಂಭದ ದಿನಾಂಕದಿಂದ ಒಂದು ವರ್ಷದೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ದೇವಾಲಯಕ್ಕೆ ಸೇರಿರುವ ಮತ್ತಷ್ಟು ಇನಾಂ ಜಮೀನುಗಳು ರೀಗ್ರ್ಯಾಂಟ್ ಆಗುವ ಸಾಧ್ಯತೆ ಇದೆ.<br><br>ಪ್ರಸ್ತುತ ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಅಧೀನಕ್ಕೆ ಒಳಪಟ್ಟಿರುವ ಪ್ರವರ್ಗ "ಎ" ಮತ್ತು "ಬಿ" ಅಧಿಸೂಚಿತ ದೇವಸ್ಥಾನ/ ಸಂಸ್ಥೆಗಳಿಗೆ ಸಂಬಂದಿಸಿದಂತೆ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಮತ್ತು ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿಯವರು ಜನವರಿ 2024ರ ಅಂತ್ಯಕ್ಕೆ ಸಲ್ಲಿಸಿರುವ ಸ್ಥಿರಾಸ್ತಿಯ ಮಾಹಿತಿಯಂತೆ ಪ್ರವರ್ಗ "ಎ" 205 ದೇವಾಲಯಗಳ ಒಟ್ಟು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಸ್ಥಿರಾಸ್ತಿ 6,323 ಎಕರೆ ಹಾಗೂ ಪ್ರವರ್ಗ "ಬಿ" 193 ದೇವಾಲಯಗಳ ಒಟ್ಟು ಸ್ಥಿರಾಸ್ತಿ 1,555 ಎಕರೆ ಇರುತ್ತದೆ.<br><br>ಈವರೆಗೆ ಅಳತೆ ಕಾರ್ಯ ಪೂರೈಸಿ ನೀಡಲಾದ ವರದಿ ಮತ್ತು ಕಂಡುಬಂದ ಪ್ರಕರಣಗಳಿಗೆ ಸಂಬಂಧಿಸಿದಂತೆ ದೇವಾಲಯಗಳ ಜಮೀನುಗಳು ಒತ್ತುವರಿಯಾಗಿರುವ ಒಟ್ಟು 236 ಪ್ರಕರಣಗಳು ಇರುತ್ತದೆ.<br><br>ದೇವಾಲಯಕ್ಕೆ ಸಂಬಂದಿಸಿದ ಸ್ಥಿರಸ್ವತ್ತಿನ ಒತ್ತುವರಿ ಪ್ರಕರಣಗಳು ಕಂಡು ಬಂದಲ್ಲಿ ಅದನ್ನು ತೆರವುಗೊಳಿಸಲು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯಮ 1997 ಕಾಯ್ದೆ ಮತ್ತು ಅದಕ್ಕೆ ಸಂಬಂಧಿಸಿದ ಇತರೆ ಕಾನೂನಿನ (IPC1860 ಇತ್ಯಾದಿ) ಅಡಿಯಲ್ಲಿ ಕ್ರಮಕೈಗೊಳ್ಳಲಾಗುತ್ತಿದೆ. |
| ಆ) | ಅಕ್ರಮವಾಗಿ ನೋಂದಾಯಿಸಿ ಕೊಂಡಿರುವ ಪ್ರಕರಣಗಳೆಷ್ಟು; (ವಿವರ ನೀಡುವುದು) | ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣ ಸಂ: WP 27/2018(LB-RES) ರ ದಿನಾಂಕ:14.09.2023ರ ಆದೇಶವನ್ನು ಪಾಲನೆ ಮಾಡಿ ತಮ್ಮ ಕಾರ್ಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಅಧಿಸೂಚಿತ ಮುಜರಾಯಿ ಸಂಸ್ಥೆಗಳಿಗೆ ಸೇರಿದ ಜಮೀನುಗಳ ಬಾಬ್ತು ಪಹಣಿಗಳನ್ನು ಪರಿಶೀಲಿಸಿ, ದೇವಾಲಯದ ಜಮೀನುಗಳು ಅರ್ಚಕರ ಹೆಸರಿನಲ್ಲಿ/ಆಡಳಿತ ಕಮಿಟಿ/ವ್ಯವಸ್ಥಾಪನಾ ಕಮಿಟಿ ಅಥವಾ ಯಾವುದೇ ದೇವಾಲಯದ ಕಾರ್ಯನಿರ್ವಾಹಕರ ಹೆಸರಿನಲ್ಲಿ ದಾಖಲಾಗಿದ್ದಲ್ಲಿ ಮಾನ್ಯ ನ್ಯಾಯಾಲಯದ ಆದೇಶದಂತೆ ಕೂಡಲೇ ದೇವಾಲಯದ ಹೆಸರಿಗೆ ಖಾತೆ ದಾಖಲು ಮಾಡಿ **"ದೇವಾಲಯದ ಹೆಸರು- ಧಾರ್ಮಿಕ ದತ್ತಿ ಇಲಾಖೆ"** ಎಂದು ನಮೂದಿಸುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಕ್ರಮ ವಹಿಸಲು ಪಾಲನಾ ವರದಿಯನ್ನು ಸಲ್ಲಿಸಲು ಈಗಾಗಲೇ ದಿನಾಂಕ:26.10.2023, ದಿ:02.11.2023, ದಿ:01.12.2023 ಮತ್ತು 21.03.2024ರ ಪತ್ರಗಳಲ್ಲಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.<br><br>ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ಮಾಹಿತಿ ನಿರೀಕ್ಷಿಸಲಾಗಿದ್ದು, ಮಾಹಿತಿ ಸ್ವೀಕೃತವಾದ ನಂತರವಷ್ಟೇ ಅಕ್ರಮವಾಗಿ ನೋಂದಾಯಿಸಿಕೊಂಡಿರುವ ಪ್ರಕರಣಗಳೆಷ್ಟು ಎಂಬ ಮಾಹಿತಿ ಲಭ್ಯವಾಗುತ್ತದೆ. |
| ಇ) | ದೇವಸ್ಥಾನಗಳ ಆಸ್ತಿಯನ್ನು ಅಕ್ರಮವಾಗಿ ನೊಂದಾಯಿಸಿಕೊಳ್ಳುವುದನ್ನು ತಪ್ಪಿಸಲು ಸರ್ಕಾರ ಹೊಸ ಕಾನೂನು ಜಾರಿಗೊಳಿಸಲು ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಕಂಇ 88 ಮುಸಪ್ರ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು